ಪಶು ವೈದ್ಯ ಕಾಲೇಜು ಪ್ರಾರಂಭಿಸುವುದು

73 (200); ಶ್ರೀ ಕ್ಯಾತಸಂದ್ರ ಎನ್. ರಾಜಣ್ಣ (ಮಧುಗಿರಿ)

ಅ) ಮಧುಗಿರಿ ಪಟ್ಟಣದಲ್ಲಿ ನಗರ ಯೋಜನಾ ಪ್ರಾಧಿಕಾರದಿಂದ ಅನುಮೋದನೆಗೊಂಡ ವಸತಿ ನಿವೇಶನಗಳ ಬಡಾವಣೆಗಳೆಷ್ಟು? (ಬಡಾವಣೆಗಳ ನಕ್ಷೆಯೊಂದಿಗೆ ವಿವರ ಒದಗಿಸುವುದು)

ಶ್ರೀ ವಿನಯಕುಮಾರ್ ಸೊರಕೆ (ಮಾನ್ಯ ನಗರಾಭಿವೃದ್ಧಿ ಸಚಿವರು)

ಅ) ಮಧುಗಿರಿ ಪಟ್ಟಣದಲ್ಲಿ ನಗರ ಯೋಜನಾ ಪ್ರಾಧಿಕಾರದಿಂದ 70 ವಸತಿ ನಿವೇಶನಗಳ ಬಡಾವಣೆಗಳಿಗೆ ತಾಂತ್ರಿಕ ಅನುಮೋದನೆ ನೀಡಲಾಗಿದೆ. ವಿವರಗಳನ್ನು ಅನುಬಂಧದಲ್ಲಿ ನೀಡಲಾಗಿದೆ.

ಪಶು ವೈದ್ಯ ಕಾಲೇಜು ಪ್ರಾರಂಭಿಸುವುದು

74 (201); ಶ್ರೀ ಕ್ಯಾತಸಂದ್ರ ಎನ್. ರಾಜಣ್ಣ (ಮಧುಗಿರಿ)

ಅ) ತುಮಕೂರು ಜಿಲ್ಲೆಯಲ್ಲಿ ಹೊಸದಾಗಿ ಪಶುವೈದ್ಯ ಕಾಲೇಜು ತೆರೆಯುವ ಪ್ರಸ್ತಾವನೆ ಸರ್ಕಾರದ ಮುಂದಿದೆಯೇ;

ಆ) ಹಾಗಿದ್ದಲ್ಲಿ, ಪಶುವೈದ್ಯ ಕಾಲೇಜನ್ನು ಎಂದಿನಿಂದ ಪ್ರಾರಂಭಿಸಲಾಗುವುದು;

ಇ) ಪಶುವೈದ್ಯ ಕಾಲೇಜು ಪ್ರಾರಂಭಿಸುವುದರಿಂದ ದಲಿತರು, ಹಿಂದುಳಿದವರು ಹಾಗೂ ಬಡವರು ಹೆಚ್ಚಿನ ಸಂಖ್ಯೆಯಲ್ಲಿರುವ ಈ ಜಿಲ್ಲೆಯ ಜನರಿಗೆ ಹೆಚ್ಚು ಅನುಕೂಲವಾಗುದಿಲ್ಲವೇ?

ಶ್ರೀ ಟಿ.ಬಿ. ಜಯಚಂದ್ರ (ಕಾನೂನು, ಸಂಸದೀಯ ವ್ಯವಹಾರಗಳು ಮತ್ತು ಪಶುಸಂಗೋಪನೆ ಹಾಗೂ ಮುಜರಾಯಿ ಸಚಿವರು)

ಅ) ಮತ್ತು ಆ) ತುಮಕೂರು ಜಿಲ್ಲೆಯಲ್ಲಿ ಹೊಸದಾಗಿ ಕಾಲೇಜು ತೆರೆಯುವ ಬಗ್ಗೆ ಯಾವುದೇ ತೀರ್ಮಾನವನ್ನು ತೆಗೆದುಕೊಂಡಿರುವುದಿಲ್ಲ. ತೀರ್ಮಾನವಾದ ನಂತರ ಭಾರತೀಯ ಪಶುವೈದ್ಯ ಪರಿಷತ್ತಿನ ಮಾರ್ಗಸೂಚಿಯನ್ವಯ ಕ್ರಮವನ್ನು ತೆಗೆದುಕೊಳ್ಳಲಾಗುವುದು.

ಇ) ರಾಜ್ಯದಲ್ಲಿ 4 ಪಶುವೈದ್ಯಕೀಯ ಕಾಲೇಜುಗಳು ನಡೆಯುತ್ತಿವೆ ಮತ್ತು 3 ಪಶುವೈದ್ಯಕೀಯ ಕಾಲೇಜುಗಳು ಹೊಸದಾಗಿ ಪ್ರಾರಂಭಿಸಲು ಅನುಮತಿಯನ್ನು ನೀಡಲಾಗಿದೆ (ಗದಗ್, ಅಥಣಿ, ಪುತ್ತೂರು). ಈ ಕಾಲೇಜುಗಳಲ್ಲಿ ಎಲ್ಲಾ ವರ್ಗಗಳು, ದಲಿತು ಸೇರಿದಂತೆ ಪ್ರವೇಶವನ್ನು ತೆಗೆದುಕೊಳ್ಳಲು ಮುಕ್ತವಾಗಿ ಅವಕಾಶವನ್ನು ಕಲ್ಪಿಸಲಾಗಿದೆ.

ಪ್ರತಿ ಜಿಲ್ಲೆಯಲ್ಲಿ ಒಂದು ಪಶುವೈದ್ಯಕೀಯ ಕಾಲೇಜು ಸ್ಥಾಪಿಸಲು ಕಷ್ಟಸಾಧ್ಯವಾಗುತ್ತದೆ.

ಖಾಲಿಯಿರುವ ಪಶುವೈದ್ಯ ಹಾಗೂ ಇನ್ನಿತರ ಹುದ್ದೆಗಳನ್ನು ಭರ್ತಿ ಮಾಡುವುದು

75 (211); ಶ್ರೀ ಮಧು ಬಂಗಾರಪ್ಪ ಎಸ್. (ಸೊರಬ)

ಅ) ರಾಜ್ಯದಲ್ಲಿ ಮಂಜೂರಾಗಿರುವ ಪಶುವೈದ್ಯರು ಹಾಗೂ ಇನ್ನಿತರೆ ಸಿಬ್ಬಂದಿ ವರ್ಗಗಳ ಹುದ್ದೆಗಳ ಸಂಖ್ಯೆ ಎಷ್ಟು; ಖಾಲಿ ಇರುವ ಹುದ್ದೆಗಳ ಸಂಖ್ಯೆ ಎಷ್ಟು; (ವೃಂದಗಳವಾರು ವಿವರ ನೀಡುವುದು);

ಆ) ಹಾಗಿದ್ದಲ್ಲಿ, ಖಾಲಿ ಇರುವ ಪಶುವೈದ್ಯರು ಹಾಗೂ ಇನ್ನಿತರೆ ಸಿಬ್ಬಂದಿ ವರ್ಗಗಳ ಹುದ್ದೆಗಳನ್ನು ತುಂಬಲು ಸರ್ಕಾರ ಕೈಗೊಂಡಿರುವ ಕ್ರಮಗಳೇನು?